# 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಘೋಷಿಸಲಾದ ಯೋಜನೆಗಳ ವಿವರಗಳು.

- **88(ಇ).** 165 ಕೋಟಿ ರೂ.ಗಳ ವೆಚ್ಚದಲ್ಲಿ ಬಾಡಿಗೆ ಕಟ್ಟಡಗಳಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ 50 "ಕನಕದಾಸ" ವಿದ್ಯಾರ್ಥಿನಿಲಯಗಳಿಗೆ ಸುಸಜ್ಜಿತ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುವುದು.

- **154.** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತರ ಮತ್ತು ಇತರೆ ವರ್ಗದ ಮಕ್ಕಳಲ್ಲಿ ಉನ್ನತ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು, ಮೊಟ್ಟಮೊದಲ ಬಾರಿಗೆ "ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿನಿಲಯ" ಎಂಬ ಹೊಸ ಯೋಜನೆಯಡಿ ರಾಜ್ಯದ ಶೈಕ್ಷಣಿಕ ಕೇಂದ್ರಗಳಾದ ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಕಲಬುರಗಿ, ಮಂಗಳೂರು ಮತ್ತು ಮೈಸೂರಿನಲ್ಲಿ ತಲಾ 1,000 ಸಾಮರ್ಥ್ಯದ ಬಹುಮಹಡಿಯ ವಿದ್ಯಾರ್ಥಿನಿಲಯ ಸಮುಚ್ಚಯಗಳನ್ನು 250ಕೋಟಿ ರೂ.ಗಳ ಮೊತ್ತದಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಿರ್ಮಿಸಲಾಗುವುದು.

- **155.** ವಿದ್ಯಾರ್ಥಿನಿಲಯಗಳಲ್ಲಿ ಉತ್ತಮ ಗುಣಮಟ್ಟದ ಆಹಾರವನ್ನು ಒದಗಿಸಲು ಮಾಸಿಕ ಭೋಜನ ವೆಚ್ಚವನ್ನು 150 ರೂ.ಗಳಷ್ಟು ಹೆಚ್ಚಿಸಲು 107 ಕೋಟಿ ರೂ. ಹೆಚ್ಚುವರಿ ಅನುದಾನ ಒದಗಿಸಲಾಗುವುದು.

- **156**. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿ ಬೇಡಿಕೆ ಮತ್ತು ಹಂಚಿಕೆಯನ್ನು ಸರಿದೂಗಿಸುವ ಉದ್ದೇಶದಿಂದ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ವಿದ್ಯಾರ್ಥಿನಿಲಯಗಳಲ್ಲಿ ಸಿ.ಇ.ಟಿ. ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸಲಾಗುವುದು.

- **162.** 2022-23ನೇ ಸಾಲಿನಲ್ಲಿ ವಿವಿಧ ಅಭಿವೃದ್ಧಿ ನಿಗಮಗಳ ಬಳಿ ಲಭ್ಯವಿರುವ 615 ಕೋಟಿ ರೂ.ಗಳ ಜೊತೆಗೆ ಹೊಸದಾಗಿ ಅನುಮೋದಿಸಿರುವ 500 ಕೋಟಿ ರೂ.ಗಳ ಹೆಚ್ಚುವರಿ ಅನುದಾನವೂ ಸೇರಿ ಒಟ್ಟಾರೆ 1,115 ಕೋಟಿ ರೂ.ಗಳ ಮೊತ್ತದಲ್ಲಿ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

- **168.** ಮಾನವೀಯತೆ, ಸಮಾನತೆಯ ಹರಿಕಾರ, ಶ್ರೀ ನಾರಾಯಣ ಗುರುರವರ ಸ್ಮರಣಾರ್ಥ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದು ಶ್ರೀ ನಾರಾಯಣ ಗುರು ವಸತಿ ಶಾಲೆಯನ್ನು ಪ್ರಾರಂಭಿಸಲಾಗುವುದು.

- **169.** ಸರ್ಕಾರದ ಅನುದಾನವು ಯಾವುದೇ ಸೋರಿಕೆಯಾಗದೇ ನೇರವಾಗಿ ವಿದ್ಯಾರ್ಥಿಗಳಿಗೆ ತಲುಪಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ವಿದ್ಯಾರ್ಥಿನಿಲಯಗಳ ಪ್ರವೇಶಾತಿ/ ಕಾರ್ಯಾಚರಣೆ, ಆಡಳಿತ, ನಿರ್ವಹಣೆ ಮತ್ತು

ವೆಚ್ಚಗಳನ್ನು ಸಂಪೂರ್ಣವಾಗಿ ಗಣಕೀಕೃತ ಆಡಳಿತ ವ್ಯವಸ್ಥೆಯ ಮೂಲಕ ನಿರ್ವಹಿಸಲಾಗುವುದು.

- **170.** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿಗಾಗಿ ಸ್ಥಾಪಿಸಲಾಗಿರುವ ನಿಗಮಗಳ ಮೂಲಕ 400ಕೋಟಿ ರೂ.ಗಳ ಮೊತ್ತದಲ್ಲಿ ಯೋಜನೆಗಳನ್ನು ಹಮ್ಮಿಕೊಳ್ಳಲಾಗುವುದು. ದೇವರಾಜ ಅರಸು ಅಭಿವೃದ್ಧಿ ನಿಗಮದ ಮೂಲಕ ಹಿಂದುಳಿದ ಹಾಗೂ ಅತೀ ಹಿಂದುಳಿದ ಸಮುದಾಯಗಳಾದ ತಿಗಳ, ಮಾಳಿ, ಮಾಳಿ ಮಾಲಗಾರ, ಕುಂಬಾರ, ಯಾದವ, ದೇವಾಡಿಗ, ಸಿಂಪಿ, ಕ್ಷತ್ರಿಯ, ಮೇದಾರ, ಕುಂಚಿ, ಕರ್ಮ, ಪಿಂಜಾರ/ನದಾಫ್, ಕುರುಬ, ಬಲಿಜ, ಈಡಿಗ, ಹಡಪದ ಹಾಗೂ ಇತರೆ ಜನಾಂಗದ ಅಭಿವೃದ್ಧಿಗೆ 400 ಕೋಟಿ ರೂ.ಗಳ ಮೊತ್ತದಲ್ಲಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು.

- **171.** ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ಹಾಗೂ ಒಕ್ಕಲಿಗರ ಅಭಿವೃದ್ಧಿ ನಿಗಮವನ್ನು ಈಗಾಗಲೇ ಘೋಷಿಸಿದ್ದು, ಪ್ರಸಕ್ತ ಸಾಲಿನಲ್ಲಿ ತಲಾ 100 ಕೋಟಿ ರೂ.ಗಳ ಮೊತ್ತದಲ್ಲಿ ಕಾರ್ಯಕ್ರಮ ರೂಪಿಸಲಾಗುವುದು.

- **172.** ಮರಾಠಾ ಅಭಿವೃದ್ಧಿ ನಿಗಮದ ಮೂಲಕ 50 ಕೋಟಿ ರೂ.ಗಳ ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು.

- **173.** ಕೊಡವ ಜನಾಂದ ಶ್ರೇಯೋಭಿವೃದ್ಧಿಗಾಗಿ 10 ಕೋಟಿ ರೂ. ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುವುದು.

- **176.** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಓದುತ್ತಿರುವ ಮಕ್ಕಳಿಗೆ ಸ್ಪೋಕನ್ ಇಂಗ್ಲೀಷ್ ಹಾಗೂ ವ್ಯಕ್ತಿತ್ವ ವಿಕಸನದ ತರಬೇತಿಗಳನ್ನು ಐದು ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲಾಗುವುದು.

- **177.** ಹಿಂದುಳಿದ ವರ್ಗಗಳ ಸುಮಾರು 25,000 ಯುವ ಜನರಿಗೆ ಕೌಶಲ್ಯ ಅಭಿವೃದ್ಧಿಪಡಿಸಿ ಉದ್ಯೋಗಮುಖಿಯನ್ನಾಗಿಸಲು ಸರ್ಕಾರದ ಸಂಸ್ಥೆಗಳಾದ ITIs, GTTC, KGTTI ರಲ್ಲಿ ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ ನೀಡಲು "ಅಮೃತ ಮುನ್ನಡೆ" ಎಂಬ ಹೊಸ ಯೋಜನೆಯನ್ನು ಆರಂಭಿಸಲಾಗುವುದು.

- **178.** ಸಮಾಜ ಕಲ್ಯಾಣ, ಪರಿಶಿಷ್ಟ ಪಂಗಡ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಸಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳಿಂದ 50,000 ವಿದ್ಯಾರ್ಥಿಗಳಿಗೆ ಸರ್ಕಾರಿ ಉದ್ಯೋಗಕ್ಕೆ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ತರಬೇತಿ ನೀಡಲಾಗುವುದು.